# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1053 (1173) |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹ್ಮದ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ). |
| ಉತ್ತರಿಸಬೇಕಾದ ದಿನಾಂಕ | 07/03/2022 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾವೇರಿ ಗದಗ ಮತ್ತು ಹುಬ್ಬಳ್ಳಿ-ಧಾರವಾಡ ಜಿಲ್ಲೆಗಳಲ್ಲಿ ಕೋವಿಡ್ ಸಂದರ್ಭದಲ್ಲಿ ಅನೇಕ ಕುಟುಂಬಗಳು ಕೆಲಸ ಕಳೆದುಕೊಂಡು ಆಹಾರವಿಲ್ಲದೆ ಅಲೆದಾಡುವಂತ ಪರಿಸ್ಥಿತಿಯಲ್ಲಿದ್ದಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು.<br>ಹಾವೇರಿ ಗದಗ ಮತ್ತು ಹುಬ್ಬಳ್ಳಿ-ಧಾರವಾಡ ಜಿಲ್ಲೆಗಳಿಗೆ ಕೋವಿಡ್ ಸಂದರ್ಭದಲ್ಲಿ ವಿತರಿಸಿರುವ ಪರಿಹಾರದ ವಿವರ ಈ ಕೆಳಕಂಡಂತ್ತಿದೆ. (ಕೆಳಗಿನ ಕೋಷ್ಟಕ ನೋಡಿ) |
| ಆ) | ಸರ್ಕಾರದ ವತಿಯಿಂದ ಒಟ್ಟು ಎಷ್ಟು ಕುಟುಂಬಗಳಿಗೆ ಆಹಾರ ಕಿಟ್‌ಗಳನ್ನು ಒದಗಿಸಲಾಗಿದೆ; ವಿತರಿಸುತ್ತಿರುವ ಆಹಾರ ಕಿಟ್‌ಗಳನ್ನು ಕೆಲವು ಮುಖಂಡರು ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಕೋವಿಡ್-19ರ ಮೊದಲ ಅಲೆ ಸಂದರ್ಭದಲ್ಲಿ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 7.15 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ಮತ್ತು ಕೋವಿಡ್-19ರ ಎರಡನೇ ಅಲೆ ಸಂದರ್ಭದಲ್ಲಿ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 23.42 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ಮತ್ತು ಅಸಂಘಟಿತ ವಲಯದ ಕಾರ್ಮಿಕರಿಗೆ 3.80 ಲಕ್ಷ ಆಹಾರದ ಕಿಟ್‌ಗಳನ್ನು ತಯಾರಿಸಿ ಮಂಡಳಿಯವತಿಯಿಂದ ರಾಜ್ಯದಾದ್ಯಂತ ವಿತರಿಸಲಾಗಿರುತ್ತದೆ.<br><br>ಈ ಕಿಟ್‌ಗಳನ್ನು ಕೆಲವು ಮುಖಂಡರು ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ಮಂಡಳಿಯ ಗಮನಕ್ಕೆ ಬಂದಿರುವುದಿಲ್ಲ. |

| ಜಿಲ್ಲೆ | ಒಂದನೇ ಅಲೆ ಸಂದರ್ಭದಲ್ಲಿ ತಲಾ ವಿತರಿಸಿದ ಪರಿಹಾರ | | ಎರಡನೇ ಅಲೆ ಸಂದರ್ಭದಲ್ಲಿ ವಿತರಿಸಿದ ಪರಿಹಾರ | |
|---|---|---|---|---|
| | ಒಂದು ಬಾರಿ ಸಹಾಯ ಧನ ತಲಾ ರೂ. 5,000/-ಗಳ ಪರಿಹಾರ | ಆಹಾರದ ಕಿಟ್‌ಗಳು | ಒಂದು ಬಾರಿ ಸಹಾಯ ಧನ ತಲಾ ರೂ. 3,000/-ಗಳ ಪರಿಹಾರ | ಆಹಾರದ ಕಿಟ್‌ಗಳು |
| ಹಾವೇರಿ | 44,376 | 30,500 | 1,03,693 | 1,00,000 |
| ಗದಗ | 23,849 | 12,000 | 37,738 | 35,000 |
| ಹುಬ್ಬಳ್ಳಿ-ಧಾರವಾಡ | 77,085 | 27,500 | 70,590 | 85,000 |

| | | |
|---|---|---|
| ಇ) | ಹಾವೇರಿ, ಗದಗ ಮತ್ತು ಹುಬ್ಬಳ್ಳಿ- ಧಾರವಾಡ ಜಿಲ್ಲೆಗಳಲ್ಲಿ ಕೊರೋನಾ ಸಂದರ್ಭದಲ್ಲಿ ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮಕ್ಕಳ ಹಸಿವು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು. | ಮಂಡಳಿಯ ವತಿಯಿಂದ ಕಾರ್ಮಿಕರಿಗೆ ಮತ್ತು ಅವಲಂಬಿತರಿಗಾಗಿ ಕೊರೋನಾ ಸಂದರ್ಭದಲ್ಲಿ ಫುಡ್ ಕಿಟ್‌ಗಳನ್ನು ವಿತರಿಸಲಾಗಿದ್ದು, ಮಕ್ಕಳಿಗೆ ಪ್ರತ್ಯೇಕವಾಗಿ ಮಂಡಳಿಯ ವತಿಯಿಂದ ಪೌಷ್ಠಿಕ ಆಹಾರ ಒದಗಿಸಿರುವುದಿಲ್ಲ.<br><br>ಪ್ರಸ್ತುತ ಮಂಡಳಿಯ ವತಿಯಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಕೆಲಸ ನಿರ್ವಹಿಸುವ ವೇಳೆಯಲ್ಲಿ ಕೆಲಸದಲ್ಲಿ 6 ವರ್ಷದವರೆಗಿನ ಮಕ್ಕಳ ಪೋಷಣೆಗಾಗಿ ರಾಜ್ಯದ್ಯಾದಂತ ಶಿಶು ಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಹಾವೇರಿ ಜಿಲ್ಲೆಯಲ್ಲಿ 02, ಗದಗ ಜಿಲ್ಲೆಯಲ್ಲಿ 01, ಹುಬ್ಬಳ್ಳಿ-ಧಾರವಾಡ ಜಿಲ್ಲೆಯಲ್ಲಿ 06 ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸದರಿ ಕೇಂದ್ರಗಳಲ್ಲಿ ಮಕ್ಕಳಿಗೆ ಪೌಷ್ಠಿಕ ಆಹಾರವನ್ನು ಕೂಡ ಒದಗಿಸಲಾಗುತ್ತಿದೆ. |

ಕಾಇ 144 ಎಲ್ಇಟಿ 2022

(ಅರಬೈಲ್ ಶಿವರಾಮ ಹೆಬ್ಬಾರ)
ಕಾರ್ಮಿಕ ಸಚಿವರು